# Akashvani : Bangalore
# Regional Bulletin In Kannada
# 04.10.2024 / 18.40 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ಸಂಪುಟ ಸಭೆಯಲ್ಲಿ ಚರ್ಚೆ ಬಳಿಕ ಒಳಮೀಸಲಾತಿ ಜಾರಿ ಬಗ್ಗೆ ಸೂಕ್ತ ತೀರ್ಮಾನ- ಮುಖ್ಯಮಂತ್ರಿ ಸಿದ್ದರಾಮಯ್ಯ

೨. ಭದ್ರಾ ಅಭಯಾರಣ್ಯದಲ್ಲಿ ಆನೆ ಶಿಬಿರ ಸ್ಥಾಪನೆ-ಸಚಿವ ಈಶ್ವರ ಖಂಡ್ರೆ

೩. ೪೧೪ನೇ ಶ್ರೀರಂಗಪಟ್ಟಣ ದಸರಾಗೆ ನಟ ಶಿವರಾಜ್‌ಕುಮಾರ್ ಚಾಲನೆ

೪. ಮೈಸೂರಿನಲ್ಲಿ ಇದೇ ೬ರಿಂದ ೧೦ ರವರೆಗೆ ಯುವ ದಸರಾ ಆಯೋಜನೆ

೫. ಮನರಂಜನಾ ಕ್ಷೇತ್ರದಲ್ಲಿ ಜಾಗತಿಕ ಕೇಂದ್ರವಾಗಿ ಬೆಳೆಯುವ ಸಾಮರ್ಥ್ಯ ಭಾರತಕ್ಕಿದೆ- ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಕಾರ್ಯದರ್ಶಿ ಸಂಜಯ್ ಜಾಜು ವಿಶ್ವಾಸ

**<><*<><>*><>**

ಜಾತಿ ಗಣತಿ ವರದಿಯನ್ನು ಸ್ವೀಕರಿಸಿದ್ದು, ವರದಿಯನ್ನು ಸಂಬಂಧಿಸಿದ ಇಲಾಖೆ ಸಚಿವರೊಂದಿಗೆ ಮತ್ತು ಸಂಪುಟ ಸಭೆಯಲ್ಲಿರಿಸಿ, ಚರ್ಚೆ ನಡೆಸಿದ ನಂತರ, ಅದರ ಜಾರಿ ಬಗ್ಗೆ ಸೂಕ್ತ ತೀರ್ಮಾನ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಕೊಪ್ಪಳದ ಬಸಾಪುರ ಗ್ರಾಮದಲ್ಲಿನ ಗಿಣಿಗೇರ ಏರ್ ಸ್ಟ್ರಿಪ್‌ನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಒಳಮೀಸಲಾತಿ ಜಾರಿಯ ಬಗ್ಗೆ ಸರ್ವೋಚ್ಛ ನ್ಯಾಯಾಲಯ ಆದೇಶ ನೀಡಿದೆ. ಈ ಸಂಬಂಧ ಸಚಿವ ಸಂಪುಟದಲ್ಲಿ ಹಾಗೂ ಪಕ್ಷದ ವರಿಷ್ಠರೊಂದಿಗೆ ಚರ್ಚೆ ನಡೆಸಲಾಗುವುದು ಎಂದರು.

ತಮ್ಮ ಪರ ಜೆಡಿಎಸ್ ಶಾಸಕ ಜಿ.ಟಿ.ದೇವೇಗೌಡರ ಮಾತಿನ ಕುರಿತು ಪ್ರತಿಕ್ರಿಯಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಜಿ.ಟಿ.ದೇವೇಗೌಡರು ಜೆಡಿಎಸ್ ಕೋರ್ ಕಮಿಟಿ ಅಧ್ಯಕ್ಷರಾಗಿದ್ದು, ಅವರ ಹೇಳಿಕೆ ಸರಿಯಾಗಿಯೇ ಇರುತ್ತದೆ. ಬಿಜೆಪಿ ಮತ್ತು ಜೆಡಿಎಸ್‌ನವರಿಗೆ ನಾವು ಅಧಿಕಾರದಲ್ಲಿದ್ದರೆ, ಅವರ ಪಕ್ಷಗಳು ದುರ್ಬಲವಾಗುವ ಭಯ ಅವರನ್ನು ಕಾಡುತ್ತಿದೆ ಎಂದು ದೂರಿದರು. ಸಚಿವ ಸತೀಶ್ ಜಾರಕಿಹೊಳಿ ಕಾಂಗ್ರೆಸ್ ವರಿಷ್ಠರನ್ನು ಭೇಟಿಯಾಗಿರುವ ಬಗ್ಗೆ ಪ್ರತಿಕ್ರಿಯೆ ನೀಡಿದ ಅವರು, ಎಐಸಿಸಿ ಅಧ್ಯಕ್ಷರಾಗಿರುವ ಮಲ್ಲಿಕಾರ್ಜುನ ಖರ್ಗೆಯವರನ್ನು ಸಚಿವ ಸತೀಶ್ ಜಾರಕಿಹೊಳಿ ಭೇಟಿಯಾಗುವುದು ತಪ್ಪೇನಲ್ಲ. ಇಲ್ಲ-ಸಲ್ಲದ ಊಹಾಪೋಹಗಳಿಗೆ ಅವಕಾಶ ನೀಡಬಾರದು ಎಂದು ಹೇಳಿದರು.

**<><*<><>*><>**

ಹಾಸನ, ಚಿಕ್ಕಮಗಳೂರು, ಶಿವಮೊಗ್ಗ ಭಾಗದ ಕಾಡಾನೆ ಹಾವಳಿ ನಿಯಂತ್ರಿಸಲು ಭದ್ರಾ ಅಭಯಾರಣ್ಯದಲ್ಲಿ ಆನೆ ಶಿಬಿರ ಸ್ಥಾಪಿಸುವುದಾಗಿ ರಾಜ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ್ ಬಿ ಖಂಡ್ರೆ ಘೋಷಿಸಿದ್ದಾರೆ. ಶಿವಮೊಗ್ಗದ ಕುವೆಂಪು ವಿಶ್ವವಿದ್ಯಾಲಯದ ಸಭಾಂಗಣದಲ್ಲಿಂದು ನಡೆದ ಭದ್ರಾ ಹುಲಿ ಸಂರಕ್ಷಿತ ಪ್ರದೇಶದ ರಜತ ಮಹೋತ್ಸವ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ರಾಜ್ಯದಲ್ಲಿ ವನ್ಯಜೀವಿ ಮತ್ತು ಮಾನವ ಸಂಘರ್ಷ ಹೆಚ್ಚಾಗುತ್ತಿದ್ದು, ಆನೆಗಳಿಂದ ಹೆಚ್ಚಿನ ಜೀವ ಹಾನಿ ಮತ್ತು ಬೆಳೆ ಹಾನಿ ಸಂಭವಿಸುತ್ತಿದೆ. ಇದನ್ನು ನಿಯಂತ್ರಿಸಲು ಎರಡು ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಆನೆ ವಿಹಾರ ಧಾಮ ಸ್ಥಾಪಿಸಲು ಪ್ರಸ್ತಾವನೆ ಸಲ್ಲಿಸುವಂತೆ ವನ್ಯಜೀವಿ ಪರಿಪಾಲಕರಿಗೆ ಸೂಚನೆ ನೀಡಿರುವುದಾಗಿ ತಿಳಿಸಿದರು. ಈ ಆನೆ ವಿಹಾರ ಧಾಮದ ಸುಮಾರು ೫ ಸಾವಿರ ಎಕರೆ ಪ್ರದೇಶದಲ್ಲಿ ಆನೆಗಳಿಗಾಗಿ ಬಿದಿರು, ಹಲಸು, ಹುಲ್ಲು ಇತ್ಯಾದಿ ಬೆಳೆಸಲಾಗುವುದು ಮತ್ತು ಸುತ್ತಲೂ ಬ್ಯಾರಿಕೇಡ್ ಅಳವಡಿಸಿ, ಸೆರೆ ಹಿಡಿದ ಆನೆಗಳನ್ನು ಇಲ್ಲಿ ತಂದು ಬಿಡಲಾಗುವುದು. ಇದರಿಂದ ಕೊಡಗು, ಹಾಸನ, ಶಿವಮೊಗ್ಗ ಮತ್ತು ಚಿಕ್ಕಮಗಳೂರು ಜಿಲ್ಲೆಗಳಲ್ಲಿ ಕಾಡಿನ ಹೊರಗೆ ಇರುವ ಆನೆಗಳಿಂದ ಜನರಿಗೆ ಆಗುತ್ತಿರುವ ತೊಂದರೆ ತಪ್ಪಿಸಲು ಸಾಧ್ಯವಾಗುತ್ತದೆ ಎಂದು ಈಶ್ವರ್ ಖಂಡ್ರೆ ವಿವರಿಸಿದರು.

**<><*<><>*><>**

ನಾಡಹಬ್ಬ ಮೈಸೂರು ದಸರಾದ ಪರಂಪರೆಯಾದ ೪೧೪ನೇ ಶ್ರೀರಂಗಪಟ್ಟಣ ದಸರಾಗೆ ನಟ ಡಾ.ಶಿವರಾಜ್‌ಕುಮಾರ್ ಇಂದು ಚಾಲನೆ ನೀಡಿದರು. ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣ ತಾಲೂಕಿನ ಕಿರಂಗೂರಿನ ಬನ್ನಿ ಮಂಟಪದ ಬಳಿ ದಸರಾ ಆನೆಯ ಮೇಲೆ ಕೃತಕ ಅಂಬಾರಿಯಲ್ಲಿದ್ದ ನಾಡದೇವತೆ ಚಾಮುಂಡೇಶ್ವರಿಗೆ ಪುಷ್ಪಾರ್ಚನೆ ಮಾಡುವ ಮೂಲಕ ನಾಲ್ಕು ದಿನಗಳ ಶ್ರೀರಂಗಪಟ್ಟಣ ದಸರಾಗೆ ಅವರು ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ, ಸಚಿವರಾದ ದಿನೇಶ್‌ಗುಂಡೂರಾವ್, ಕೃಷ್ಣಭೈರೇಗೌಡ, ಕ್ಷೇತ್ರದ ಶಾಸಕ ರಮೇಶ್ ಬಂಡಿಸಿದ್ದೇಗೌಡ ಸೇರಿದಂತೆ ಜಿಲ್ಲೆಯ ಶಾಸಕರು, ಅಧಿಕಾರಿಗಳು ಉಪಸ್ಥಿತರಿದ್ದರು. ಈ ವೇಳೆ ಶಿವರಾಜ್‌ಕುಮಾರ್ ಮಾತನಾಡಿ, ದಸರಾ ಉದ್ಘಾಟನೆಗೆ ಅವಕಾಶ ನೀಡಿದ್ದಕ್ಕೆ ಸರ್ಕಾರಕ್ಕೆ ಧನ್ಯವಾದ ಅರ್ಪಿಸಿದರು. ಸಚಿವ

ಚಲುವರಾಯಸ್ವಾಮಿ ಮಾತನಾಡಿ, ಮೈಸೂರು ದಸರಾಗೂ ಮುನ್ನ ಶ್ರೀರಂಗಪಟ್ಟಣದಲ್ಲೇ ನಾಡಹಬ್ಬ ದಸರಾ ನಡೆಯುತ್ತಿತ್ತು. ಬಳಿಕ ದಸರಾ ಮೈಸೂರಿಗೆ ಸ್ಥಳಾಂತರವಾದರೂ ಮೂಲಪರಂಪರೆಯನ್ನು ಕಾಪಾಡಲು ನಾವು ಶ್ರೀರಂಗಪಟ್ಟಣದಲ್ಲಿ ಮೂಲ ದಸರಾ ಆಚರಿಸುತ್ತಿದ್ದೇವೆ. ಮುಂದೆಯೂ ಆಚರಿಸಲಿದ್ದೇವೆ ಎಂದು ಹೇಳಿದರು.

<><*<><>*><>

ಮೈಸೂರಿನಲ್ಲಿ ಇದೇ ೬ರಿಂದ ೧೦ರ ವರೆಗೆ ೫ ದಿನಗಳ ಕಾಲ ಯುವ ದಸರಾ ಕಾರ್ಯಕ್ರಮ ನಡೆಯಲಿದ್ದು, ಸಾರ್ವಜನಿಕರಿಗೆ ಉಚಿತ ಪ್ರವೇಶ ಇರಲಿದೆ ಎಂದು ಮೈಸೂರು ಜಿಲ್ಲಾಧಿಕಾರಿ ಲಕ್ಷ್ಮಿಕಾಂತ್ ರೆಡ್ಡಿ ತಿಳಿಸಿದ್ದಾರೆ. ಮೈಸೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಬಾರಿ ಯುವ ದಸರಾ ಕಾರ್ಯಕ್ರಮ ನಡೆಯುವ ಸ್ಥಳ ಬದಲಾವಣೆಯಾಗಿದ್ದು, ಮೈಸೂರಿನ ರಿಂಗ್ ರಸ್ತೆಯ ಉತ್ತನಹಳ್ಳಿ ಸಮೀಪದ ಬೃಹತ್ ಮೈದಾನದಲ್ಲಿ ಯುವ ದಸರಾ ಕಾರ್ಯಕ್ರಮ ನಡೆಯಲಿದೆ ಎಂದು ಮಾಹಿತಿ ನೀಡಿದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿಷ್ಣುವರ್ಧನ್ ಮಾತನಾಡಿ, ಇದೇ ೬ ರಂದು ಹಿನ್ನೆಲೆ ಗಾಯಕಿ ಶ್ರೇಯಾ ಘೋಷಾಲ್ ಮತ್ತು ತಂಡದಿಂದ ೭ ರಂದು ಸಂಗೀತ ನಿರ್ದೇಶಕ ರವಿ ಬಸ್ರೂರ್ ಮತ್ತು ತಂಡದವರಿಂದ, ೮ ರಂದು ರ್‍ಯಾಪರ್ ಬಾದ್ ಷಾ ಮತ್ತು ತಂಡದಿಂದ, ೯ ರಂದು ಸಂಗೀತ ನಿರ್ದೇಶಕ ಎ.ಆರ್.ರೆಹಮಾನ್ ಮತ್ತು ತಂಡದಿಂದ ಹಾಗೂ ೧೦ ರಂದು ಹಿರಿಯ ಸಂಗೀತ ನಿರ್ದೇಶಕ ಇಳಯರಾಜ ಮತ್ತು ತಂಡದವರಿಂದ ಸಂಗೀತ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ ಎಂದು ವಿವರಿಸಿದರು.

<><*<><>*><>

ಸೃಜನಶೀಲ ವಿಷಯ ರಚನೆಯಲ್ಲಿ ಭಾರತವು ಜಾಗತಿಕ ಕೇಂದ್ರವಾಗಲು ಸಮಯ ಪಕ್ವವಾಗಿದೆ ಎಂದು ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಕಾರ್ಯದರ್ಶಿ ಸಂಜಯ್ ಜಾಜು ವಿಶ್ವಾಸ ವ್ಯಕ್ತಪಡಿಸಿದರು. ಬೆಂಗಳೂರಿನಲ್ಲಿಂದು ಗೇಮಿಂಗ್ ಅನಿಮೇಷನ್ ಮತ್ತು ಮನರಂಜನಾ ಉದ್ಯಮದ ಪ್ರತಿನಿಧಿಗಳನ್ನು ಉದ್ದೇಶಿಸಿ ಮಾತನಾಡಿದ ಅವರು, ಜಾಗತಿಕ ಮಾಧ್ಯಮ ಮನರಂಜನಾ ಕ್ಷೇತ್ರದಲ್ಲಿ ಭಾರತದ ಪಾಲು ಕೇವಲ ಎರಡು ಪ್ರತಿಶತವಾಗಿದ್ದು, ಇದು ಗಮನಾರ್ಹವಾಗಿ ಬೆಳೆಯುವ ಸಾಮರ್ಥ್ಯವನ್ನು ಹೊಂದಿದೆ ಎಂದು ಹೇಳಿದರು. ೨೦೨೯ರ ವೇಳೆಗೆ ಈ ವಲಯವು ಪ್ರಸ್ತುತ ೨೫ ಶತಕೋಟಿ ಮಾರುಕಟ್ಟೆಯಿಂದ ೧೦೦ ಶತಕೋಟಿ ಮಾರುಕಟ್ಟೆಗೆ ಬೆಳೆಯುವ ನಿಟ್ಟಿನಲ್ಲಿ ಗುರಿ ಹೊಂದಲಾಗಿದ್ದು, ಉದ್ಯಮಕ್ಕೆ ಎಲ್ಲಾ ರೀತಿಯ ಬೆಂಬಲ ನೀಡಲಾಗುವುದು ಎಂದರು. ಫೆಬ್ರವರಿಯಲ್ಲಿ ನವದೆಹಲಿಯಲ್ಲಿ ನಡೆಯಲಿರುವ ವರ್ಲ್ಡ್ ಆಡಿಯೋ ವಿಷುಯಲ್ ಮತ್ತು ಎಂಟರ್‌ಟೈನ್‌ಮೆಂಟ್ ಶೃಂಗಸಭೆ ಅಥವಾ ವೇವ್ ಶೃಂಗಸಭೆ ಕುರಿತು ಇದೇ ವೇಳೆ ಸಂಜಯ್ ಜಾಜು ಮಾತನಾಡಿದರು.

<><*<><>*><>

ಉದ್ಯಮಿ ವಿಜಯ್ ತಾತಾ ಅವರಿಂದ ಅನೇಕರಿಗೆ ವಂಚನೆಯಾಗಿದ್ದು, ಮೋಸ ಹೋದವರಿಗೆ ನ್ಯಾಯ ಕೊಡಿಸಲು ವಿಶೇಷ ತನಿಖಾ ತಂಡ-ಎಸ್ಐಟಿ ರಚನೆ ಮಾಡಬೇಕು ಎಂದು ಬೆಂಗಳೂರು ನಗರ ಜೆಡಿಎಸ್ ಘಟಕದ ಅಧ್ಯಕ್ಷ ಹಾಗೂ ವಿಧಾನ ಪರಿಷತ್ ಮಾಜಿ ಶಾಸಕ ಎಚ್.ಎಂ.ರಮೇಶ್ ಗೌಡ ಒತ್ತಾಯಿಸಿದರು. ಬೆಂಗಳೂರಿನಲ್ಲಿ ಪಕ್ಷದ ಕಚೇರಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅನೇಕರಿಗೆ ವಿಜಯ್ ತಾತಾ ಮೋಸ ಮಾಡಿದ್ದಾರೆ. ಅವರ ವಿರುದ್ಧ ಕರ್ನಾಟಕದಲ್ಲಿ ಮಾತ್ರವಲ್ಲ, ನಾಗಪುರ, ಪುಣೆ, ಮುಂಬೈನಲ್ಲೂ ಅನೇಕ ಪ್ರಕರಣಗಳು ದಾಖಲಾಗಿವೆ. ಈ ಕುರಿತು ತನಿಖೆ ನಡೆಯಬೇಕು ಎಂದು ಆಗ್ರಹಿಸಿದರು. ರಾಜ್ಯದ ಆಂತರಿಕ ಭದ್ರತಾ ವಿಭಾಗದಿಂದ ತಮ್ಮ ಫೋನ್ ಕದ್ದಾಲಿಕೆ ಆಗುತ್ತಿದೆ. ಈ ಬಗ್ಗೆ ಪೊಲೀಸ್ ಆಯುಕ್ತರಿಗೆ ದೂರು ನೀಡಲಾಗಿದೆ. ಈ ಕುರಿತು ತನಿಖೆ ನಡೆಯಬೇಕು ಎಂದು ರಮೇಶ್ ಗೌಡ ಒತ್ತಾಯಿಸಿದರು.

<><*<><>*><>

ಚಿಕ್ಕಬಳ್ಳಾಪುರ ನಗರಸಭೆ ಅಧ್ಯಕ್ಷ ಗಜೇಂದ್ರ ನೇತೃತ್ವದಲ್ಲಿ ನಗರಸಭೆಯ ಆರೋಗ್ಯ ವಿಭಾಗದ ಅಧಿಕಾರಿಗಳ ತಂಡ ಇಂದು, ನಗರದ ನಾಲ್ಕನೇ ವಾರ್ಡ್‌ನ ಮನೆ ಮನೆಗೆ ಭೇಟಿ ನೀಡಿ, ಅಲ್ಲಿನ ನಿವಾಸಿಗಳಿಗೆ ಹಸಿ ಕಸ ಮತ್ತು ಒಣ ಕಸ ವಿಂಗಡಣೆ ಕುರಿತು ಅರಿವು ಮೂಡಿಸಿದರು. ಕಸವನ್ನು ರಸ್ತೆ ಮತ್ತು ಬೀದಿ ಬದಿ ಹೀಗೆ ಎಲ್ಲೆಂದರಲ್ಲಿ ಸುರಿಯದೇ, ಮನೆಯ ಬಳಿ ಬರುವ ನಗರಸಭೆಯ ಕಸ ಸಂಗ್ರಹ ವಾಹನಕ್ಕೇ ನೀಡಬೇಕೆಂದು ಮನವಿ ಮಾಡಲಾಯಿತು.

<><*<><>*><>

ಸಂಕ್ಷಿಪ್ತ ಸುದ್ದಿಗಳು

೧. ಮೈಸೂರು ದಸರಾ ಉದ್ಘಾಟನೆ ಸಂದರ್ಭದಲ್ಲಿ ಮೈಸೂರಿನ ವೈಭವ, ಮೈಸೂರು ರಾಜರ ಕೊಡುಗೆ, ರಾಜ್ಯದ ಇತಿಹಾಸ ಸ್ಮರಣೆ, ಚಾಮುಂಡಿ ತಾಯಿಯ ವಿಚಾರ ಸ್ಮರಿಸಬೇಕಿತ್ತು. ಆದರೆ ಮುಖ್ಯಮಂತ್ರಿಗಳು ಕೇವಲ ಮುಡಾ ವಿಚಾರದ ಜಪ ಮಾಡಿದ್ದಾರೆ ಎಂದು ವಿಧಾನ ಪರಿಷತ್ತಿನ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಬೆಂಗಳೂರಿನಲ್ಲಿಂದು ದೂರಿದ್ದಾರೆ.

೨.	ಚನ್ನಪಟ್ಟಣ ಕ್ಷೇತ್ರದ ಬೇವೂರು ಜಿಲ್ಲಾ ಪಂಚಾಯತಿ ವ್ಯಾಪ್ತಿಯ ಮಾಕಳಿ ಗ್ರಾಮದಲ್ಲಿ ಬೃಹತ್ ಮತ್ತು ಮಧ್ಯಮ ನೀರಾವರಿ ಇಲಾಖೆಯ ಅನುದಾನದ ಅಡಿ ೨ ಕೋಟಿ ೧೬ ಲಕ್ಷ ರೂಪಾಯಿ ವೆಚ್ಚದಲ್ಲಿ ಕಾಂಕ್ರಿಟ್ ರಸ್ತೆ ಮತ್ತು ಚರಂಡಿ ಅಭಿವೃದ್ಧಿ ಕಾಮಗಾರಿಗೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಚಾಲನೆ ನೀಡಿದರು.

೩.	ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ನಾಳೆ ಚಿಕ್ಕಬಳ್ಳಾಪುರ ಜಿಲ್ಲೆ ಶಿಡ್ಲಘಟ್ಟ ನಗರದ ಸಾರ್ವಜನಿಕ ಆಸ್ಪತ್ರೆಗೆ ಭೇಟಿ ನೀಡಲಿದ್ದು, ೧೨ ಹಾಸಿಗೆಗಳ ಐಸೋಲೇಷನ್ ವಾರ್ಡ್ ಮತ್ತು ಬಿ.ಪಿ.ಹೆಚ್.ಯು ಪ್ರಯೋಗಾಲಯ ಉದ್ಘಾಟಿಸಲಿದ್ದಾರೆ.

೪.	ವಿಜಯಪುರ ನಗರದ ನೌಭಾಗ್ ರಸ್ತೆಯ ಒಳಚರಂಡಿ ಅತಿಕ್ರಮಿಸಿ ನಿರ್ಮಿಸಿದ ಕಟ್ಟಡಗಳನ್ನು ಮಹಾನಗರ ಪಾಲಿಕೆ ವತಿಯಿಂದ ತೆರವುಗೊಳಿಸಲಾಯಿತು. ಸ್ಥಳಕ್ಕೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ಭೇಟಿ ನೀಡಿ, ತೆರವು ಕಾರ್ಯಾಚರಣೆಯನ್ನು ಪರಿಶೀಲಿಸಿದರು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**